# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು-572 103

ಸಂಖ್ಯೆ: ತುವಿ: ಡಿಇವಿ-02:2025-26/2252 ದಿನಾಂಕ:27.10.2025

**:ಸುತ್ತೋಲೆ:**

ವಿಷಯ:ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಸ್ವಾತಂತ್ರ ಸಂಗ್ರಾಮದ ಐತಿಹಾಸಿಕ ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಆಯೋಜಿಸುವ ಬಗ್ಗೆ.

ಉಲ್ಲೇಖ:1. ವಿವಿ ಸುತ್ತೋಲೆ ಸಂಖ್ಯೆ:ತುವಿ:ಡಿಇವಿ-02:2024-25/3405 ದಿನಾಂಕ:11.02.2025

2. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಸಂ:ಕರಾಉಶಿಪ/87/ಗಾಂಧಿ ಭಾರತ/2024-25/750 ದಿನಾಂಕ:25.09.2025

3. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ:03.10.2025 (ಕಂಡಿಕೆ 41)

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(01)ರ ಪತ್ರದನ್ವಯ 1924 ರಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ಬೆಳಗಾವಿಯಲ್ಲಿ ನಡೆದ ಅಧಿವೇಶನದ ಶತಮಾನೋತ್ಸವದ ಅಂಗವಾಗಿ 'ಗಾಂಧಿ ಭಾರತ' ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಹಾಗೂ ರಚನಾತ್ಮಕವಾಗಿ ಆಚರಣೆಗೆ ಸಂಬಂಧಿಸಿದಂತೆ, ಈಗಾಗಲೇ ಸರ್ಕಾರದಿಂದ ಎಲ್ಲಾ ವಿಶ್ವವಿದ್ಯಾಲಯಗಳಿಗೆ ಆಯುಕ್ತರು ಕಾರ್ಯಕ್ರಮವನ್ನು ಆಯೋಜಿಸಲು ತಿಳಿಸಿದ್ದಾರೆ. ಬ್ಯಾಕ್ ಡ್ರಾಪ್, ಸರ್ಕಾರಿ ಜಾಹಿರಾತುಗಳಲ್ಲಿ ಮತ್ತು ಪ್ರಚಾರ ಸಾಮಗ್ರಿಗಳಲ್ಲಿ ಗಾಂಧೀ ಭಾರತ ಕಾರ್ಯಕ್ರಮದ ಲಾಂಛನವನ್ನು ಕಡ್ಡಾಯವಾಗಿ ಮುದ್ರಿಸಬೇಕು. ಎಲ್ಲಾ ಸರ್ಕಾರಿ ಅನುದಾನಿತ ಹಾಗೂ ಅನುದಾನ ರಹಿತ ಶಾಲೆ-ಕಾಲೇಜು, ವಿಶ್ವವಿದ್ಯಾನಿಲಯ ಸೇರಿದಂತೆ, ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿ ಧ್ಯಾನಸ್ಥ ಗಾಂಧೀಜಿಯವರ ಭಾವಚಿತ್ರವನ್ನು ಮತ್ತು ಅವರು ಬೋಧಿಸಿದ ಸಪ್ತ ಸಾಮಾಜಿಕ ಪಾತಕಗಳನ್ನು ಕಡ್ಡಾಯವಾಗಿ ಪ್ರಮುಖ ಸ್ಥಳಗಳಲ್ಲಿ ಪ್ರದರ್ಶಿಸಬೇಕೆಂದು ಸಭೆಯಲ್ಲಿ ತೀರ್ಮಾನಿಸಿದ ವಿಚಾರವನ್ನು ತಿಳಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ ಸದರಿ ವಿಷಯದ ಕುರಿತು ಈಗಾಗಲೇ ಕೈಗೊಂಡಿರುವ ಕ್ರಮಗಳ ಜೊತೆಗೆ 'ತತ್ವ ರಹಿತ ರಾಜಕಾರಣ, ದುಡಿಮೆ ಇಲ್ಲದ ಸಂಪತ್ತು, ಆತ್ಮಸಾಕ್ಷಿ ಇಲ್ಲದ ಸಂತೋಷ, ಚಾರಿತ್ರ್ಯವಿಲ್ಲದ ಶಿಕ್ಷಣ, ನೀತಿ ಇಲ್ಲದ ವ್ಯಾಪಾರ, ಮಾನವೀಯತೆ ಇಲ್ಲದ ಜ್ಞಾನ, ತ್ಯಾಗವಿಲ್ಲದ ಪ್ರಜೆ,' ಈ ಅಂಶಗಳನ್ನು ಸಹ ಕಡ್ಡಾಯವಾಗಿ ಪಾಲಿಸಲು ಸೂಚಿಸಲಾಗಿದೆ. ಕೈಗೊಂಡ ಕ್ರಮದ ಕುರಿತು ಸರ್ಕಾರದ ಉನ್ನತ ಶಿಕ್ಷಣ ಇಲಾಖೆಗೆ ವರದಿ ಮಾಡುವಂತೆ ಕೋರಿರುತ್ತಾರೆ.

ಮೇಲ್ಕಂಡ ಸರ್ಕಾರದ ಸೂಚನೆಗಳನ್ನು ಸಂಬಂಧಪಟ್ಟ ಕಚೇರಿ/ಕಾಲೇಜು/ವಿಭಾಗಗಳು ಕಡ್ಡಾಯವಾಗಿ ಪಾಲಿಸುವಂತೆ ಹಾಗೂ ಸದರಿ ನಡಾವಳಿಯಲ್ಲಿ ತಿಳಿಸಿರುವ ಕಾರ್ಯಕ್ರಮಗಳನ್ನು ಆಯೋಜಿಸಲು ಸೂಕ್ತ ಕ್ರಮವಹಿಸುವಂತೆ ತಿಳಿಸಲಾಗಿದೆ.

ಈ ಸಂಬಂಧ ಗಾಂಧಿ ಭಾರತ ಅಂಗವಾಗಿ ಎಲ್ಲಾ ಸರ್ಕಾರಿ ಪತ್ರ ವ್ಯವಹಾರಗಳಲ್ಲಿ ಲೆಟರ್ ಹೆಡ್, ಆಮಂತ್ರಣ ಪತ್ರಿಕೆ ಸಭೆ-ಸಮಾರಂಭಗಳ ಬ್ಯಾನರ್ ಬ್ಯಾಕ್ ಡ್ರಾಪ್, ಸರ್ಕಾರಿ ಜಾಹಿರಾತುಗಳಲ್ಲಿ ಮತ್ತು ಪ್ರಚಾರ ಸಾಮಗ್ರಿಗಳಲ್ಲಿ ಗಾಂಧೀ ಭಾರತ ಕಾರ್ಯಕ್ರಮದ ಲಾಂಛನವನ್ನು ಮುದ್ರಿಸುವ ಹಾಗೂ ಧ್ಯಾನಸ್ಥ ಗಾಂಧೀಜಿಯವರ ಭಾವಚಿತ್ರವನ್ನು ಮತ್ತು ಅವರು ಬೋಧಿಸಿದ ಸಪ್ತ ಸಾಮಾಜಿಕ ಪಾತಕಗಳನ್ನು ಪ್ರಮುಖ ಸ್ಥಳಗಳಲ್ಲಿ ಪ್ರದರ್ಶಿಸುವಂತೆ ಹಾಗೂ ಈಗಾಗಲೇ ಉಲ್ಲೇಖ(01)ರ ಸುತ್ತೋಲೆಯನ್ವಯ ಕೈಗೊಂಡಿರುವ ಕ್ರಮದ ಕುರಿತು ಉನ್ನತ ಶಿಕ್ಷಣ ಇಲಾಖೆಗೆ ವರದಿಯನ್ನು ಸಲ್ಲಿಸುವಂತೆ ತಿಳಿಸಿರುವ ಹಿನ್ನೆಲೆಯಲ್ಲಿ, ವಿಶ್ವವಿದ್ಯಾನಿಲಯದ ಘಟಕ ಮತ್ತು ಸ್ನಾತಕೋತ್ತರ ಅಧ್ಯಯನ ವಿಭಾಗಗಳು ವಿಶ್ವವಿದ್ಯಾನಿಲಯದ ಮುಖಾಂತರ ಮತ್ತು ಸಂಯೋಜಿತ ಕಾಲೇಜುಗಳು ನೇರವಾಗಿ ವರದಿಯನ್ನು ಕಡ್ಡಾಯವಾಗಿ ಸಲ್ಲಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಈ ಮೂಲಕ ತಿಳಿಸಲಾಗಿದೆ.

ಆದೇಶದ ಮೇರೆಗೆ,

ಉಪಕುಲಸಚಿವರು,

ಉಪಕುಲಸಚಿವರು
ಅಭಿವೃದ್ಧಿ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

1. ಕುಲಸಚಿವರು (ಪರೀಕ್ಷಾಂಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಅಧ್ಯಕ್ಷರು/ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಅಧ್ಯಕ್ಷರು/ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ಹಾಗೂ ಸಂಶೋಧನಾ ವಿಭಾಗಗಳು, "ಜ್ಞಾನಸಿರಿ ಕ್ಯಾಂಪಸ್" ಬಿದರಕಟ್ಟೆ, ಹೆಬ್ಬೂರು ಹೋಬಳಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

5. ಅಧ್ಯಕ್ಷರು/ಸಂಯೋಜಕರು, ಶಿರಾ ಸ್ನಾತಕೋತ್ತರ ಅಧ್ಯಯನ ಕೇಂದ್ರ ಮತ್ತು ತಿಪಟೂರು ಸ್ನಾತಕೋತ್ತರ ಅಧ್ಯಯನ ಕೇಂದ್ರ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕ/ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು.
7. ಉಪಕುಲಸಚಿವರು, ಅಭಿವೃದ್ಧಿ ವಿಭಾಗ/ಸಾಮಾನ್ಯ ಮತ್ತು ಖರೀದಿ ಕೋಶ/ಸಿಬ್ಬಂದಿ ವಿಭಾಗ/ಶೈಕ್ಷಣಿಕ ವಿಭಾಗ/ಸಿಂಡಿಕೇಟ್ ವಿಭಾಗ/ ಕಾನೂನು ಕೋಶ/ಪರೀಕ್ಷಾಂಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
8. ನಿರ್ದೇಶಕರು, ಸಂಶೋಧನೆ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
9. ನಿರ್ದೇಶಕರು, IQAC, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
10. ನೋಡಲ್ ಅಧಿಕಾರಿಗಳು, RUSA, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
11. ನಿರ್ದೇಶಕರು, PMEB, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
12. ನಿರ್ದೇಶಕರು, ಪ್ರಸಾರಾಂಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
13. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಪರಿಷತ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
14. ನಿರ್ದೇಶಕರು, ಡಾ. ಅಂಬೇಡ್ಕರ್ ಅಧ್ಯಯನ ಕೇಂದ್ರ, ತು.ವಿ.ತು.
15. ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಾಭಿವೃದ್ದಿ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
16. ಉಪ ನಿರ್ದೇಶಕರು/ಸಂಯೋಜಕರು, ದೈಹಿಕ ಶಿಕ್ಷಣ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
17. ನಿರ್ದೇಶಕರು/ಸಂಯೋಜಕರು, ರಾಷ್ಟ್ರೀಯ ಸೇವಾ ಯೋಜನೆ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
18. ಕಾರ್ಯಪಾಲಕ ಅಭಿಯಂತರರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
19. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
20. ಗ್ರಂಥಪಾಲಕರು, ವಿ.ವಿ. ಗ್ರಂಥಾಲಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಶ್ರೀ ಹರಿಪ್ರಸಾದ್ ಟಿ. ಎನ್., ಸಹ ಪ್ರಾಧ್ಯಾಪಕರು, ಇತಿಹಾಸ ವಿಭಾಗ, ವಿಶ್ವವಿದ್ಯಾನಿಲಯ ಕಲಾ ಕಾಲೇಜು ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಡಾ. ಮಹಾಲಿಂಗ ಕೆ., ಸಹ ಪ್ರಾಧ್ಯಾಪಕರು, ಸ್ನಾತಕೋತ್ತರ ರಾಜ್ಯಶಾಸ್ತ್ರ ಅಧ್ಯಯನ ಹಾಗೂ ಸಂಶೋಧನಾ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಕಚೇರಿ ಪ್ರತಿ.

# ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು


ಸಂ. ಕರಾಉಶಿಪ/87/ಗಾಂಧಿ ಭಾರತ/2024-25 /750 ದಿನಾಂಕ:25.09.2025

ಗೆ,

1. ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಕುಲಸಚಿವರುಗಳಿಗೆ
2. ರಾಜ್ಯದ ಖಾಸಗಿ ವಿಶ್ವವಿದ್ಯಾಲಯಗಳ ಕುಲಸಚಿವರುಗಳಿಗೆ
3. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು

ಮಾನ್ಯರೇ,

ವಿಷಯ: ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಸ್ವಾತಂತ್ರ್ಯ ಸಂಗ್ರಾಮದ ಐತಿಹಾಸಿಕ ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಆಯೋಜಿಸುವ ಬಗ್ಗೆ.

ಉಲ್ಲೇಖ: 1) ದಿನಾಂಕ:02.12.2024 ರಂದು ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ತೀರ್ಮಾನದಂತೆ.

2) ಸರ್ಕಾರದ ಪತ್ರ ಸಂ. ಇ-ಕ್ರಮಾಂಕ: ಇಡಿ 587 ಯುಆರ್‌ಸಿ 2024 ದಿನಾಂಕ:16.12.2024 ಮತ್ತು 17.05.2025

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 1924 ರಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ಬೆಳಗಾವಿಯಲ್ಲಿ ನಡೆದ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವದ ಅಂಗವಾಗಿ 'ಗಾಂಧಿ ಭಾರತ' ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಹಾಗೂ ರಚನಾತ್ಮಕವಾಗಿ ಆಚರಣೆಗೆ ಸಂಬಂಧಿಸಿದಂತೆ, ದಿನಾಂಕ:02.12.2024 ರಂದು ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಸಭೆ ನಡೆದಿದ್ದು, ಸದರಿ ಸಭೆಯಲ್ಲಿ ರಾಜ್ಯದ ಸಚಿವರುಗಳು ಹಾಗೂ ಶಾಸಕರು ಮತ್ತು ಗಣ್ಯರು ಉಪಸ್ಥಿತರಿದ್ದರು. ಇದಲ್ಲದೆ, ದಿನಾಂಕ: 02.04.2025 ರಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಸಚಿವರ ಅಧ್ಯಕ್ಷತೆಯಲ್ಲಿಯೂ ಸಹ ಕಾರ್ಯಕ್ರಮದ ಆಯೋಜನೆ ಕುರಿತು ಸಭೆ ನಡೆದಿರುತ್ತದೆ. ಈಗಾಗಲೇ, ಸರ್ಕಾರದಿಂದ ಎಲ್ಲಾ ವಿಶ್ವವಿದ್ಯಾಲಯಗಳಿಗೆ, ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಗೆ ದಿನಾಂಕ:16.12.2024 ಮತ್ತು 17.05.2025 ರಂದು ಸರ್ಕಾರವು ಕಾರ್ಯಕ್ರಮವನ್ನು ಆಯೋಜಿಸುವ ಕುರಿತು ಉಲ್ಲೇಖ-2 ರಲ್ಲಿ ವಿವರವಾಗಿ ಪತ್ರ ಬರೆದಿರುವ ಕಡೆ ಗಮನಸೆಳೆಯಲಾಗಿದೆ.

ಮುಂದುವರೆದು, ಮಾನ್ಯ ಮುಖ್ಯಮಂತ್ರಿಗಳು ಹಾಗೂ ಮಾನ್ಯ ಕಾನೂನು ಸಚಿವರು ಸೂಚಿಸಿರುವಂತೆ ಕಾರ್ಯಕ್ರಮದ ಅಂಗವಾಗಿ ರಾಜ್ಯದ ಎಲ್ಲಾ ಸರ್ಕಾರಿ ಪತ್ರ ವ್ಯವಹಾರಗಳಲ್ಲಿ, ಲೆಟರ್ ಹೆಡ್, ಆಮಂತ್ರಣ ಪತ್ರಿಕೆ, ಸಭೆ-ಸಮಾರಂಭಗಳ ಬ್ಯಾನರ್, ಬ್ಯಾಕ್ ಡ್ರಾಪ್, ಸರ್ಕಾರಿ ಜಾಹೀರಾತುಗಳಲ್ಲಿ ಮತ್ತು ಪ್ರಚಾರ ಸಾಮಗ್ರಿಗಳಲ್ಲಿ ಗಾಂಧೀ ಭಾರತ ಕಾರ್ಯಕ್ರಮದ ಲಾಂಛನವನ್ನು ಕಡ್ಡಾಯವಾಗಿ ಮುದ್ರಿಸಬೇಕು. ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಶಾಲೆ-ಕಾಲೇಜು, ವಿಶ್ವವಿದ್ಯಾಲಯ ಸೇರಿದಂತೆ ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿ ಧ್ಯಾನಸ್ಥ ಗಾಂಧೀಜಿಯವರ ಭಾವಚಿತ್ರವನ್ನು ಮತ್ತು ಅವರು ಬೋಧಿಸಿದ ಸಪ್ತ ಸಾಮಾಜಿಕ ಪಾತಕಗಳನ್ನು ಕಡ್ಡಾಯವಾಗಿ ಪ್ರಮುಖ ಸ್ಥಳಗಳಲ್ಲಿ ಪ್ರದರ್ಶಿಸಬೇಕೆಂದು ಸಭೆಯಲ್ಲಿ ತೀರ್ಮಾನಿಸಲಾಯಿತು.

ಪು.ತಿ.ನೋ

ನಂ. 30, ಪ್ರಸನ್ನಕುಮಾರ ಬ್ಲಾಕ್, ವೈ. ರಾಮಚಂದ್ರ ರಸ್ತೆ, ಗಾಂಧಿನಗರ, ಬೆಂಗಳೂರು - 560 009
ದೂ : 080 2234 1395 ವೆಬ್ : www.kshec.karnataka.gov.in

1. ತತ್ವ ರಹಿತ ರಾಜಕಾರಣ
2. ದುಡಿಮೆ ಇಲ್ಲದ ಸಂಪತ್ತು
3. ಆತ್ಮಸಾಕ್ಷಿ ಇಲ್ಲದ ಸಂತೋಷ
4. ಚಾರಿತ್ರ್ಯವಿಲ್ಲದ ಶಿಕ್ಷಣ
5. ನೀತಿ ಇಲ್ಲದ ವ್ಯಾಪಾರ
6. ಮಾನವೀಯತೆ ಇಲ್ಲದ ಜ್ಞಾನ
7. ತ್ಯಾಗವಿಲ್ಲದ ಪೂಜೆ

ಈ ಹಿನ್ನೆಲೆಯಲ್ಲಿ, ಸದರಿ ವಿಷಯದ ಕುರಿತು ಈಗಾಗಲೇ ಕೈಗೊಂಡಿರುವ ಕ್ರಮಗಳ ಜೊತೆಗೆ ಈ ಮೇಲ್ಕಂಡ ಅಂಶಗಳನ್ನು ಸಹ ಕಡ್ಡಾಯವಾಗಿ ಪಾಲಿಸಲು ಈ ಮೂಲಕ ಸೂಚಿಸಲಾಗಿದೆ. ಕೈಗೊಂಡ ಕ್ರಮದ ಕುರಿತು ಸರ್ಕಾರದ ಉನ್ನತ ಶಿಕ್ಷಣ ಇಲಾಖೆಗೆ ವರದಿ ಮಾಡುವಂತೆ ಈ ಮೂಲಕ ಕೋರಲಾಗಿದೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

K. G. [signature] 25/09/25

ಕಾರ್ಯನಿರ್ವಾಹಕ ನಿರ್ದೇಶಕರು

ಪ್ರತಿ:

1. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು
2. ಸರ್ಕಾರದ ಕಾರ್ಯದರ್ಶಿಗಳ ಆಪ್ತಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಕಟ್ಟಡ, ಬೆಂಗಳೂರು
3. ನಿರ್ದೇಶಕರು, ಕಾಲೇಜು ಶಿಕ್ಷಣ/ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
4. ಉಪಾಧ್ಯಕ್ಷರ ಆಪ್ತಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು
5. ರಾಜ್ಯದ ವಿಶ್ವವಿದ್ಯಾಲಯಗಳ ಕುಲಪತಿಗಳ ಆಪ್ತಕಾರ್ಯದರ್ಶಿಗಳು - ಕುಲಪತಿಗಳ ಅವಗಾಹನೆಗೆ ತರಲು
6. ರಾಜ್ಯದ ಖಾಸಗಿ ವಿಶ್ವವಿದ್ಯಾಲಯಗಳ ಕುಲಪತಿಗಳ ಆಪ್ತಕಾರ್ಯದರ್ಶಿಗಳು - ಕುಲಪತಿಗಳ ಅವಗಾಹನೆಗೆ ತರಲು
7. ಕಛೇರಿ ಪ್ರತಿ